ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
Karnataka School Quality Assessment & Accreditation Council
ಕೆ.ಎಸ್.ಇ.ಇ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacbangalore@gmail.com & ksqaacntsenmms@gmail.com

ಸಂಖ್ಯೆ: ಕೆ3/ NMMS ಪರೀಕ್ಷೆ/14/2022-23 ದಿನಾಂಕ: 04.08.2022

## ಜ್ಞಾಪನ

ವಿಷಯ:- 2022-23ನೇ ಸಾಲಿನ NMMS ಪರೀಕ್ಷೆಯ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡುವ ಬಗ್ಗೆ.
ಉಲ್ಲೇಖ:- Department of school Education & Literacy ನವದೆಹಲಿ ರವರ ಪತ್ರ ಸಂಖ್ಯೆ: F.No.1-1-14/ 2022-SS, Dated: 18-07-2022.

~*~*~*~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2022-23ನೇ ಸಾಲಿನಲ್ಲಿ NMMS ಪರೀಕ್ಷೆಯನ್ನು 2022ರ ಅಕ್ಟೋಬರ್-ಡಿಸೆಂಬರ್ ಮಾಹೆಯಲ್ಲಿ ನಡೆಸುವಂತೆ ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿದ್ದು, ಅದರಂತೆ ಪರೀಕ್ಷೆ ನಡೆಸಬೇಕಿರುತ್ತದೆ. ಈ ಪರೀಕ್ಷೆಯು ಮಾನಸಿಕ ಸಾಮರ್ಥ್ಯ ಪರೀಕ್ಷೆ (MAT) ಹಾಗೂ ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ (SAT) ಎಂಬ ಬಹುಆಯ್ಕೆ ಮಾದರಿಯ ಎರಡು ಪ್ರಶ್ನೆಪತ್ರಿಕೆಗಳನ್ನು ಒಳಗೊಂಡಿದ್ದು, ಪ್ರತಿ ಪ್ರಶ್ನೆಪತ್ರಿಕೆಗೆ 90 ಅಂಕಗಳನ್ನು ನಿಗದಿಪಡಿಸಲಾಗಿದೆ. ಈ ಪರೀಕ್ಷೆಯಲ್ಲಿ ಅರ್ಹತೆ ಗಳಿಸಿದ ವಿದ್ಯಾರ್ಥಿಗಳಿಗೆ 9 ನೇ ತರಗತಿಯಿಂದ 12 ನೇ ತರಗತಿವರೆಗೆ (4 ವರ್ಷಗಳು) ವಾರ್ಷಿಕ ರೂ. 12000/- ರಂತೆ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತಿದೆ.

NMMS ಪರೀಕ್ಷೆಗೆ Online ಮೂಲಕ ಅರ್ಜಿಯನ್ನು ಆಹ್ವಾನಿಸಲು ಕ್ರಮವಹಿಸಲಾಗುತ್ತಿದ್ದು, ಶಾಲಾ ಮುಖ್ಯಶಿಕ್ಷಕರು ತಮ್ಮ ಶಾಲೆಯ ಆಸಕ್ತ ವಿದ್ಯಾರ್ಥಿಗಳ ಅರ್ಜಿಗಳನ್ನು Online ಮೂಲಕ ಸಲ್ಲಿಸಬೇಕಾಗಿರುತ್ತದೆ.

**NMMS ಪರೀಕ್ಷೆಗೆ ನೋಂದಾಯಿಸಿಕೊಳ್ಳುವ ವಿದ್ಯಾರ್ಥಿಗಳು ಹೊಂದಿರಬೇಕಾದ ಅರ್ಹತೆಗಳು ಮತ್ತು ಅರ್ಜಿ ಸಲ್ಲಿಸಲು ಶಾಲಾ ಮುಖ್ಯಶಿಕ್ಷಕರು ಪೂರ್ವಭಾವಿಯಾಗಿ ಸಿದ್ಧಪಡಿಸಿಕೊಳ್ಳಬೇಕಾದ/ವಿದ್ಯಾರ್ಥಿಗಳಿಂದ ಸಂಗ್ರಹಿಸಬೇಕಾದ ದಾಖಲೆ/ಮಾಹಿತಿಗಳು:-**

- **NMMS** ಪರೀಕ್ಷೆಗೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ (Local body schools) ಶಾಲೆಗಳಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರಬೇಕು.
- ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಅನುದಾನದಿಂದ ನಡೆಯುವ ವಸತಿಯುತ ಸರ್ಕಾರಿ ಮತ್ತು ಖಾಸಗಿ ಶಾಲೆಗಳ ವಿದ್ಯಾರ್ಥಿಗಳು ಈ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. (ಉದಾ: ಮೊರಾರ್ಜಿ ದೇಸಾಯಿ, ನವೋದಯ ಶಾಲೆ, ಕೇಂದ್ರೀಯ ವಿದ್ಯಾಲಯ, ಸೈನಿಕ ಶಾಲೆ, ಇತ್ಯಾದಿ)
- ಅರ್ಜಿ ಸಲ್ಲಿಸಲು ಇಚ್ಛಿಸುವ ವಿದ್ಯಾರ್ಥಿಗಳು 7ನೇ ತರಗತಿ ಪರೀಕ್ಷೆಯಲ್ಲಿ ಸಾಮಾನ್ಯ ವರ್ಗ ಹಾಗೂ ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಶೇ.55 ರಷ್ಟು ಅಂಕಗಳನ್ನು ಹಾಗೂ ಪ.ಜಾ ಮತ್ತು ಪ.ಪಂಗಡದ ವಿದ್ಯಾರ್ಥಿಗಳು ಶೇ.50 ರಷ್ಟು ಅಂಕಗಳನ್ನು ಗಳಿಸಿರಬೇಕು.
- ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸುವ ಇತರೆ ಹಿಂದುಳಿದ ವರ್ಗ (OBC), ಪ.ಜಾ ಮತ್ತು ಪ.ಪಂಗಡದ ವಿದ್ಯಾರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಜಾತಿ ಪ್ರಮಾಣ ಪತ್ರವನ್ನು ಪಡೆದಿರಬೇಕು. (ಪ್ರಮಾಣ ಪತ್ರಗಳು ಚಾಲ್ತಿಯಲ್ಲಿರಬೇಕು)
- ವಿಕಲ ಚೇತನ (Disability) ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಸಕ್ಷಮ ಪ್ರಧಿಕಾರದಿಂದ ವಿಕಲ ಚೇತನಕ್ಕೆ ಸಂಬಂಧಿಸಿದಂತೆ ಪ್ರಮಾಣ ಪತ್ರವನ್ನು ಪಡೆದಿರಬೇಕು.
- NMMS ಪರೀಕ್ಷೆಗೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ 3,50,000 ಮೀರಿರಬಾರದು. ಸಕ್ಷಮ ಪ್ರಾಧಿಕಾರದಿಂದ ಆದಾಯ ಪ್ರಮಾಣ ಪತ್ರವನ್ನು ಪಡೆದಿರಬೇಕು ಹಾಗೂ ಪ್ರಮಾಣ ಪತ್ರವು ಚಾಲ್ತಿಯಲ್ಲಿರಬೇಕು.

Scanned with CamScanner

- ವಿದ್ಯಾರ್ಥಿ/ನಿಯ ಬ್ಯಾಂಕ್‌ಖಾತೆಗೆ ಸಂಬಂಧಿಸಿದ ಮಾಹಿತಿಗಳನ್ನು ಸಂಗ್ರಹಿಸಿಟ್ಟುಕೊಳ್ಳುವುದು. (ಬ್ಯಾಂಕ್‌ಖಾತೆಯ ಸಂಖ್ಯೆ, ಬ್ಯಾಂಕ್ ಹೆಸರು, ಬ್ಯಾಂಕ್(IFSC Code)
- ಅರ್ಜಿಗೆ ವಿದ್ಯಾರ್ಥಿ/ನಿ Photo Upload ಮಾಡುವುದು ಕಡ್ಡಾಯವಾಗಿದ್ದು, ಸಂಗ್ರಹಿಸಿಟ್ಟುಕೊಳ್ಳುವುದು.

ಈ ಪರೀಕ್ಷೆಗೆ ಬಗ್ಗೆ ಜಿಲ್ಲೆ, ತಾಲ್ಲೂಕು, ಶಾಲಾ ಹಂತದಲ್ಲಿ ವ್ಯಾಪಕ ಪ್ರಚಾರ ನೀಡಿ, ವಿದ್ಯಾರ್ಥಿಗಳು ಪರೀಕ್ಷೆಗೆ ಸಿದ್ಧತೆ ನಡೆಸಲು ಅಗತ್ಯ ಕ್ರಮವಹಿಸಲು ತಿಳಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

**ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:-**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಶಾ.ಶಿ.ಸಾ.ಇ ರವರಿಗೆ.
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಅಭಿವೃದ್ಧಿ), ಶಾ.ಶಿ.ಸಾ.ಇ ರವರಿಗೆ.
3. ರಾಜ್ಯದ ಎಲ್ಲಾ ಬ್ಲಾಕ್‌ಗಳ ಕ್ಷೇತ್ರಶಿಕ್ಷಣಾಧಿಕಾರಿಗಳು, ಶಾ.ಶಿ.ಸಾ.ಇ ರವರಿಗೆ.
4. ಸರ್ಕಾರಿ, ಅನುದಾನಿತ, ಪ್ರೌಢಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ (ಕ್ಷೇತ್ರಶಿಕ್ಷಣಾಧಿಕಾರಿಗಳ ಮೂಲಕ).
5. ಕಛೇರಿ ಪ್ರತಿ.

Scanned with CamScanner